ಸಂಪುಟ: 06 ಸಂಚಿಕೆ: 127 ಪುಟಗಳು: 08 ಸೋಮವಾರ 20 ಜುಲೈ 2026 www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

**ಮುಂಜಾನೆ ಮಾತು**

ಸಲ್ಲದ ಕೆಲಸಗಳ ಬೆನ್ನತ್ತುವುದನ್ನು ನಿಲ್ಲಿಸಿದರೆ, ಉತ್ತಮ ಸಂಗತಿಗಳು ನಮ್ಮ ಬೆಂಬಲಕ್ಕೆ ಬಂದು ನಿಲ್ಲುತ್ತವೆ!

ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

# ನಿಲ್ಲದ ಸಮರ ಅಮೆರಿಕ ಪ್ರತೀಕಾರ

- swiftly punish ಹೆಸರಿನಲ್ಲಿ ಇರಾನ್ ಮೇಲೆ ಭಾರೀ ವೈಮಾನಿಕ ದಾಳಿ
- ಹಾರ್ಮುಜ್ ಜಲಸಂಧಿ ಬಳಿ ಉದ್ವಿಗ್ನತೆ ತೀವ್ರ
- ಇರಾನ್ ಕ್ಷಿಪಣಿ ದಾಳಿಗೆ ಅಮೆರಿಕದ ಇಬ್ಬರು ಯೋಧರ ಬಲಿ
- ಮಧ್ಯಪ್ರಾಚ್ಯದಲ್ಲಿ ರಕ್ತಚೆಲ್ಲಿದ ಯುಎಸ್ ಸೈನಿಕರು

ಮಧ್ಯಪ್ರಾಚ್ಯದಲ್ಲಿ ಯುದ್ಧದ ಕಾವು ದಿನದಿಂದ ದಿನಕ್ಕೆ ಹೆಚ್ಚುತ್ತಿದ್ದು, ಇಬ್ಬರು ಸೈನಿಕರ ಸಾವಿಗೆ ಪ್ರತೀಕಾರವಾಗಿ ಅಮೆರಿಕ ಮತ್ತೆ ಇರಾನ್ ಮೇಲೆ ಭಾರೀ ವೈಮಾನಿಕ ದಾಳಿ ನಡೆಸಿದೆ. ಹಾರ್ಮುಜ್ ಜಲಸಂಧಿ ಸುತ್ತಲಿನ ಸೇನಾ ನೆಲೆಗಳು, ಶಸ್ತ್ರಾಸ್ತ್ರ ಸಂಗ್ರಹಾಗಾರಗಳು ಹಾಗೂ ಪ್ರಮುಖ ಮೂಲಸೌಕರ್ಯಗಳನ್ನು ಗುರಿಯಾಗಿಸಿಕೊಂಡು ನಡೆದ ಈ ದಾಳಿಯಿಂದ ಉದ್ವಿಗ್ನತೆ ಮತ್ತಷ್ಟು ತೀವ್ರಗೊಂಡಿದೆ.

ಜೋರ್ಡಾನ್‌ನಲ್ಲಿರುವ ಅಮೆರಿಕದ ಸೇನಾ ನೆಲೆಯ ಮೇಲೆ ನಡೆದ ಕ್ಷಿಪಣಿ ಮತ್ತು ಡ್ರೋನ್ ದಾಳಿಯಲ್ಲಿ ಇಬ್ಬರು ಅಮೆರಿಕದ ಸೈನಿಕರು ಸಾವನ್ನಪ್ಪಿದ್ದು, ಒಬ್ಬರು ನಾಪತ್ತೆಯಾಗಿ ಹಾಗೂ ನಾಲ್ವರು ಗಂಭೀರವಾಗಿ ಗಾಯಗೊಂಡಿರುವ ಘಟನೆಯ ಬೆನ್ನಲ್ಲೇ ಅಮೆರಿಕ ಇರಾನ್ ವಿರುದ್ಧ ಭಾರೀ ವೈಮಾನಿಕ ದಾಳಿ ನಡೆಸಿದೆ.

ಭಾನುವಾರ ಈ ದಾಳಿಯನ್ನು ಅಮೆರಿಕದ ಸೆಂಟ್ರಲ್ ಕಮಾಂಡ್ ಸೈನಿಕರ ಸಾವಿಗೆ ತ್ವರಿತ ಶಿಕ್ಷೆ ಎಂದು ಬಣ್ಣಿಸಿದ್ದು, ಇರಾನ್‌ನ ಸೇನಾ ಸಾಮರ್ಥ್ಯವನ್ನು ಮತ್ತಷ್ಟು ಕುಗ್ಗಿಸುವ ಉದ್ದೇಶದಿಂದ ಹಲವು ಪ್ರಮುಖ ಗುರಿಗಳನ್ನು ಹೊಡೆದುರುಳಿಸಲಾಗಿದೆ ಎಂದು ತಿಳಿಸಿದೆ.ಈ ದಾಳಿಯ ಮುಖ್ಯ ಉದ್ದೇಶ ಹಾರ್ಮುಜ್ ಜಲಸಂಧಿಯಲ್ಲಿ ತೈಲ ಟ್ಯಾಂಕರ್‌ಗಳ ಸಂಚಾರವನ್ನು ತಡೆಯುವ ಇರಾನ್‌ನ ಸಾಮರ್ಥ್ಯವನ್ನು ದುರ್ಬಲಗೊಳಿಸುವುದಾಗಿದೆ. ವಿಶ್ವದ ಒಟ್ಟು ಕಚ್ಚಾ ತೈಲ ಪೂರೈಕೆಯ ಸುಮಾರು 20 ಪ್ರತಿಶತ ಭಾಗ ಹೋರ್ಮುಜ್ ಜಲಸಂಧಿಯ ಮೂಲಕ ಸಾಗುತ್ತಿದ್ದು, ಈ ಮಾರ್ಗದ ಮೇಲಿನ ನಿಯಂತ್ರಣಕ್ಕಾಗಿ ಅಮೆರಿಕ ಮತ್ತು ಇರಾನ್ ನಡುವಿನ ಸಂಘರ್ಷ ಮತ್ತಷ್ಟು ತೀವ್ರಗೊಂಡಿದೆ.

ಇರಾನ್‌ನ ಸರ್ಕಾರಿ ಸುದ್ದಿಸಂಸ್ಥೆ ಐಆರ್‌ಎನ್‌ಎ ವರದಿ ಪ್ರಕಾರ, ಹಾರ್ಮೊಜ್ಗಾನ್ ಪ್ರಾಂತ್ಯದ ಸಿರಿಕ್ ಪ್ರದೇಶದ ಮೇಲೆ ಸ್ಥಳೀಯ ಕಾಲಮಾನ ರಾತ್ರಿ ಸುಮಾರು 1.30ರ ವೇಳೆಗೆ ಭಾರೀ ವೈಮಾನಿಕ ದಾಳಿ ನಡೆದಿದೆ ಎಂದು ತಿಳಿದುಬಂದಿದೆ. ಅದೇ ಪ್ರಾಂತ್ಯದ ಹಾಜಿಯಾಬಾದ್ ಪ್ರದೇಶವೂ ದಾಳಿಗೆ ಗುರಿಯಾಗಿದ್ದು, ಪ್ರಮುಖ ಬಂದರು ನಗರವಾದ ಬಂದರ್ ಅಬ್ಬಾಸ್‌ನಲ್ಲಿ ಸ್ಫೋಟಗಳ ಸದ್ದು ಕೇಳಿಬಂದಿದೆ. ಹಾರ್ಮುಜ್ ಜಲಸಂಧಿಯಲ್ಲಿರುವ ಖೆಷ್ಮ್ ದ್ವೀಪದ ಸಮೀಪದ ಪ್ರದೇಶಗಳ ಮೇಲೂ ಅಮೆರಿಕ ದಾಳಿ ನಡೆಸಿದೆ ಎಂದು ಇರಾನ್‌ನ ಸರ್ಕಾರಿ ಪ್ರಸಾರ ಸಂಸ್ಥೆ ವರದಿ ಮಾಡಿದೆ. ಇದರ ನಡುವೆ ನೆರೆಯ ಇರಾಕ್‌ನಲ್ಲೂ ಉದ್ವಿಗ್ನ ಪರಿಸ್ಥಿತಿ ಮುಂದುವರಿದಿದೆ. ಇರ್ಬಿಲ್ ಸಮೀಪದಲ್ಲಿರುವ ಇರಾನ್ ವಿರೋಧಿ ಕುರ್ದಿಸ್ತಾನ್ ಫ್ರೀಡಂ ಪಾರ್ಟಿಯ ಸೇನಾ ನೆಲೆಯ ಮೇಲೆ ಡ್ರೋನ್ ದಾಳಿ ನಡೆದಿದ್ದು, ಎಂಟು ಮಂದಿ ಗಾಯಗೊಂಡಿದ್ದಾರೆ. ಕಳೆದ ನಾಲ್ಕು ದಿನಗಳಿಂದ ಇರ್ಬಿಲ್ ನಗರವನ್ನು ಗುರಿಯಾಗಿಸಿಕೊಂಡು ಡ್ರೋನ್ ದಾಳಿಗಳು ನಿರಂತರವಾಗಿ ನಡೆಯುತ್ತಿವೆ. ಈ ದಾಳಿಗಳ ಹಿಂದೆ ಇರಾನ್ ಅಥವಾ ಅದರ ಬೆಂಬಲಿತ ಮಿಲಿಷಿಯಾ ಸಂಘಟನೆಗಳ ಕೈವಾಡವಿರಬಹುದು ಎಂಬ ಅನುಮಾನ ವ್ಯಕ್ತವಾಗಿದ್ದರೂ, ಇದುವರೆಗೆ ಯಾವುದೇ ಸಂಘಟನೆ ಹೊಣೆ ಹೊತ್ತಿಲ್ಲ. ಅಮೆರಿಕದ ಸೆಂಟ್ರಲ್ ಕಮಾಂಡ್ ಮಾಹಿತಿ ಪ್ರಕಾರ, ಜೋರ್ಡಾನ್‌ನಲ್ಲಿರುವ ಸೇನಾ ನೆಲೆಯ ಮೇಲೆ ಶುಕ್ರವಾರ ನಡೆದ ಡ್ರೋನ್ ಮತ್ತು ಕ್ಷಿಪಣಿ ದಾಳಿಯಲ್ಲಿ ಇಬ್ಬರು ಅಮೆರಿಕದ ಸೈನಿಕರು ಮೃತಪಟ್ಟಿದ್ದಾರೆ.

ಒಬ್ಬ ಸೈನಿಕ ನಾಪತ್ತೆಯಾಗಿದ್ದು, ನಾಲ್ವರು ಆಸ್ಪತ್ರೆಗೆ ದಾಖಲಾಗಿದ್ದಾರೆ. ಮೃತ ಸೈನಿಕರ ಹೆಸರುಗಳನ್ನು ಅಮೆರಿಕ ಬಹಿರಂಗಪಡಿಸಿಲ್ಲ. ಯುದ್ಧ ಆರಂಭವಾದ ಬಳಿಕ ಇರಾನ್‌ನ ನೇರ ದಾಳಿಯಿಂದ ಅಮೆರಿಕದ ಸೈನಿಕರು ಸಾವನ್ನಪ್ಪಿರುವುದು ಇದೇ ಮೊದಲ ಬಾರಿಗೆ ಎನ್ನಲಾಗಿದೆ.

ಯುದ್ಧ ಆರಂಭವಾದ ದಿನದಿಂದ ಇದುವರೆಗೆ ಒಟ್ಟು 16 ಅಮೆರಿಕದ ಸೈನಿಕರು ಪ್ರಾಣ ಕಳೆದುಕೊಂಡಿದ್ದು, 430ಕ್ಕೂ ಹೆಚ್ಚು ಯೋಧರು ಗಾಯಗೊಂಡಿದ್ದಾರೆ. ಆರಂಭಿಕ ದಿನಗಳಲ್ಲಿ ಕುವೈತ್‌ನಲ್ಲಿರುವ ಕಮಾಂಡ್ ಕೇಂದ್ರದ ಮೇಲೆ ನಡೆದ ಇರಾನ್ ಡ್ರೋನ್ ದಾಳಿಯಲ್ಲಿ ಆರು ಮಂದಿ ಮೃತಪಟ್ಟಿದ್ದರು.

ನಂತರ ಸೌದಿ ಅರೇಬಿಯಾದ ಸೇನಾ ನೆಲೆಯ ಮೇಲಿನ ದಾಳಿಯಲ್ಲಿ ಒಬ್ಬ ಸೈನಿಕ ಮೃತಪಟ್ಟಿದ್ದರೆ.

ಇರಾಕ್‌ನಲ್ಲಿ ಇಂಧನ ತುಂಬುವ ಸೇನಾ ವಿಮಾನ ಪತನಗೊಂಡ ಪರಿಣಾಮ ಆರು ಮಂದಿ ಸಾವನ್ನಪ್ಪಿದ್ದರು.

**1** ಮಧ್ಯಪ್ರಾಚ್ಯದಲ್ಲಿ ತೀವ್ರಗೊಂಡ ಅಮೆರಿಕ-ಇರಾನ್ ಸಂಘರ್ಷ.

**2** ಜೋರ್ಡಾನ್‌ನ ಯುಎಸ್ ಸೇನಾ ನೆಲೆ ಮೇಲೆ ಇರಾನ್ ಕ್ಷಿಪಣಿ ದಾಳಿ.

**3** ಇರಾನ್ ಕ್ಷಿಪಣಿ ದಾಳಿಗೆ ಇಬ್ಬರು ಅಮೆರಿಕನ್ ಯೋಧರು ಬಲಿ.

## ಮೂಲಸೌಕರ್ಯಗಳ ಮೇಲೆ ದಾಳಿ

ದೇಶದ ಸುಮಾರು 90 ಪ್ರತಿಶತ ಕುಡಿಯುವ ನೀರು ಪೂರೈಕೆಯಾಗುತ್ತಿದ್ದ ಹಿನ್ನೆಲೆಯಲ್ಲಿ ವಿದ್ಯುತ್ ಉತ್ಪಾದನೆ ಮತ್ತು ನೀರಿನ ಸರಬರಾಜಿನ ಮೇಲೆ ತೀವ್ರ ಪರಿಣಾಮ ಬೀರಿದೆ. ಅಗ್ನಿಶಾಮಕ ಸಿಬ್ಬಂದಿ ಸೇರಿದಂತೆ ಹಲವರು ಗಾಯಗೊಂಡಿದ್ದು, ಕ್ಷಿಪಣಿ ದಾಳಿಯ ಭೀತಿಯಿಂದ ಕುವೈತ್ ತನ್ನ ವಾಯುಪ್ರದೇಶವನ್ನು ತಾತ್ಕಾಲಿಕವಾಗಿ ಮುಚ್ಚಿ ವಿಮಾನಗಳ ವೇಳಾಪಟ್ಟಿಯನ್ನು ಬದಲಾಯಿಸಿದೆ. ಇದಕ್ಕೆ ಪ್ರತಿಯಾಗಿ ಅಮೆರಿಕ ಕಳೆದ ಏಳು ದಿನಗಳಿಂದ ನಿರಂತರವಾಗಿ ಇರಾನ್‌ನ ಸೇನಾ ಮತ್ತು ಮೂಲಸೌಕರ್ಯಗಳ ಮೇಲೆ ದಾಳಿ ನಡೆಸುತ್ತಿದೆ. ನಿಗಾ ವ್ಯವಸ್ಥೆಗಳು, ಸೇನಾ ಲಾಜಿಸ್ಟಿಕ್ಸ್ ಕೇಂದ್ರಗಳು, ಭೂಗತ ಶಸ್ತ್ರಾಸ್ತ್ರ ಸಂಗ್ರಹಾಗಾರಗಳು, ಸಮುದ್ರ ಕಾರ್ಯಾಚರಣೆಗಳಿಗೆ ಸಂಬಂಧಿಸಿದ ಸೌಲಭ್ಯಗಳು ಸೇರಿದಂತೆ ಹಲವು ಗುರಿಗಳನ್ನು ಹೊಡೆದುರುಳಿಸಲಾಗಿದೆ ಎಂದು ಅಮೆರಿಕದ ಸೆಂಟ್ರಲ್ ಕಮಾಂಡ್ ತಿಳಿಸಿದೆ.



## ಖಮೇನಿ ಇರಾನ್‌ನಲ್ಲಿಯೇ ಇಲ್ಲವಂತೆ

ಇರಾನ್‌ನ ನೂತನ ಸುಪ್ರೀಂ ನಾಯಕ ಮೊಜ್ತಬಾ ಖಮೇನಿ ಸದ್ಯಕ್ಕೆ ''ಇರಾನ್‌ನಲ್ಲಿ ಇಲ್ಲ'' ಎಂದು ಇಸ್ರೇಲ್‌ನ ಭದ್ರತಾ ಮೂಲವೊಂದು ಹೇಳಿದೆ. ಇಸ್ರೇಲ್ ನೀಡಿದ ಮಾಹಿತಿಯನ್ನಿಟ್ಟುಕೊಂಡು ಸೌದಿ ಅರೇಬಿಯಾದ ಪ್ರಮುಖ ಸುದ್ದಿ ಸಂಸ್ಥೆ 'ಅಲ್-ಹದತ್' ಇಂದು ಈ ವರದಿಯನ್ನು ಪ್ರಕಟಿಸಿದೆ. ಆದರೆ, ಮೊಜ್ತಬಾ ಖಮೇನಿ ಪ್ರಸ್ತುತ ಎಲ್ಲಿದ್ದಾರೆ ಎಂಬುದರ ಕುರಿತು ಯಾವುದೇ ನಿಖರವಾದ ಪುರಾವೆಗಳನ್ನು ನೀಡಿಲ್ಲ. ಅಮೆರಿಕ ಮತ್ತು ಇಸ್ರೇಲ್‌ನ ತೀವ್ರವಾದ ದಾಳಿಯಲ್ಲಿ ಗಂಭೀರವಾಗಿ ಗಾಯಗೊಂಡಿದ್ದ ಖಮೇನಿ ಅದಾದ ಬಳಿಕ ಎಲ್ಲೂ ಬಹಿರಂಗವಾಗಿ ಕಾಣಿಸಿಕೊಂಡಿಲ್ಲ. ಭದ್ರತಾ ದೃಷ್ಟಿಯಿಂದ ತಮ್ಮ ತಂದೆ ಅಯತೊಲ್ಲಾ ಖಮೇನಿ ಅವರ ಅಂತ್ಯಕ್ರಿಯೆಯಲ್ಲಿ ಕೂಡ ಮೊಜ್ತಬಾ ಖಮೇನಿ ಭಾಗಿಯಾಗಿರಲಿಲ್ಲ. ಇದು ಸಹಜವಾಗಿಯೇ ಸಾಕಷ್ಟು ಪ್ರಶ್ನೆಗಳನ್ನು ಹುಟ್ಟುಹಾಕಿದೆ.

## ತೈಲ ಸಂಗ್ರಹ ಕೇಂದ್ರಗಳಿಗೆ ಹಾನಿ

ಯುದ್ಧಕ್ಕೆ ಅಂತ್ಯ ಹಾಡುವ ಉದ್ದೇಶದಿಂದ ಸುಮಾರು ಒಂದು ತಿಂಗಳ ಹಿಂದೆ ಮಾಡಿಕೊಂಡಿದ್ದ ಮಧ್ಯಂತರ ಒಪ್ಪಂದವನ್ನು ಅಮೆರಿಕ ಉಲ್ಲಂಘಿಸಿದೆ ಎಂದು ಆರೋಪಿಸಿರುವ ಇರಾನ್, ಆ ಒಪ್ಪಂದದ ಬದ್ಧತೆಗಳನ್ನು ಇನ್ನು ಮುಂದೆ ಪಾಲಿಸುವುದಿಲ್ಲ ಎಂದು ಘೋಷಿಸಿದೆ. ಇರಾನ್ ಉಪ ವಿದೇಶಾಂಗ ಸಚಿವ ಕಾಜೆಮ್ ಘರೀಬಾಬಾದಿ ಈ ಕುರಿತು ಸರ್ಕಾರಿ ದೂರದರ್ಶನಕ್ಕೆ ನೀಡಿದ ಸಂದರ್ಶನದಲ್ಲಿ, ಅಮೆರಿಕ ತನ್ನ ವಾಗ್ದಾನಗಳನ್ನು ಮೀರಿ ನಡೆದುಕೊಂಡಿರುವುದರಿಂದ ನಾವು ಕೂಡ ಆ ಒಪ್ಪಂದವನ್ನು ಜಾರಿಗೆ ತರುವುದಿಲ್ಲ ಎಂದು ಹೇಳಿದ್ದಾರೆ. ಈ ಮಧ್ಯೆ ಇರಾನ್ ನಡೆಸಿದ ದಾಳಿಯಲ್ಲಿ ಕುವೈತ್‌ನ ಪ್ರಮುಖ ಉಪ್ಪುನೀರು ಶುದ್ಧೀಕರಣ ಘಟಕ ಹಾಗೂ ತೈಲ ಸಂಗ್ರಹ ಕೇಂದ್ರಗಳಿಗೆ ಹಾನಿಯಾಗಿದೆ. ಎರಡು ದಿನಗಳಲ್ಲಿ ಉಪ್ಪುನೀರು ಶುದ್ಧೀಕರಣ ಘಟಕದ ಮೇಲೆ ನಡೆದ ಎರಡನೇ ದಾಳಿ ಇದಾಗಿದೆ.

## ಅಮೆರಿಕಾಗೆ ಇರಾನ್ ಎಚ್ಚರಿಕೆ

ಇದಕ್ಕೂ ಮುನ್ನ, ಖಮೇನಿ ಹೆಸರಿನಲ್ಲಿ ಇರಾನ್ ಸರ್ಕಾರಿ ದೂರದರ್ಶನದಲ್ಲಿ ಪ್ರಸಾರವಾದ ಸಂದೇಶದಲ್ಲಿ, ಅಮೆರಿಕವು ಇಸ್ಲಾಮಿಕ್ ಗಣರಾಜ್ಯದ ಮೇಲೆ ದಾಳಿಯನ್ನು ಮುಂದುವರಿಸಿದರೆ ಮರೆಯಲಾಗದ ಪಾಠ ಕಲಿಸಬೇಕಾಗುತ್ತದೆ ಎಂದು ಎಚ್ಚರಿಸಲಾಗಿದೆ. ಕದನ ವಿರಾಮಕ್ಕೆ ಸಂಬಂಧಿಸಿದ ಮಧ್ಯಂತರ ಒಪ್ಪಂದದಿಂದ ಇರಾನ್ ಹಿಂದೆ ಸರಿಯುತ್ತಿದೆ ಎಂದು ಇರಾನ್ ಸಂಧಾನಕಾರರು ಪ್ರಕಟಿಸಿದ ಕೆಲವೇ ಗಂಟೆಗಳಲ್ಲಿ ಈ ಹೇಳಿಕೆ ಹೊರಬಿದ್ದಿದೆ.

ಅಮೆರಿಕದ ಮಿಲಿಟರಿ ಕ್ರಮಕ್ಕೆ ಇರಾನ್ ಮತ್ತು ಅದರ ಪ್ರಾದೇಶಿಕ ಮಿತ್ರರಾಷ್ಟ್ರಗಳ ಒಕ್ಕೂಟವಾದ ಆಕ್ಸಿಸ್ ಆಫ್ ರೆಸಿಸ್ಟೆನ್ಸ್ ತಕ್ಕ ಪ್ರತ್ಯುತ್ತರ ನೀಡಲಿದೆ ಎಂದು ಇರಾನ್ ಎಚ್ಚರಿಸಿದೆ. ಇದರ ಬೆನ್ನಲ್ಲೇ, ವಿಶ್ವದ ಒಟ್ಟು ಕಚ್ಚಾ ತೈಲದ ಐದನೇ ಒಂದು ಭಾಗ ರಫ್ತಾಗುವ ಹಾರ್ಮುಜ್ ಜಲಸಂಧಿಯ ನಿಯಂತ್ರಣಕ್ಕಾಗಿ ಎರಡೂ ದೇಶಗಳಿಂದ ಹೋರಾಟ ತೀವ್ರಗೊಂಡಿದೆ. ಇದರಿಂದ ಜಾಗತಿಕ ಇಂಧನ ಪೂರೈಕೆಯ ಮೇಲೆ ಭಾರಿ ಪರಿಣಾಮ ಉಂಟಾಗುವ ಆತಂಕ ಎದುರಾಗಿದೆ.

## ನನ್ನನ್ನು ರಾಜಕೀಯವಾಗಿ ಮುಗಿಸಲು ಕೆಲವರಿಂದ ಷಡ್ಯಂತ್ರ: ಬಿ.ಕೆ.ಹರಿಪ್ರಸಾದ್

• ಉದಯವಾಹಿನಿ, ಬೆಂಗಳೂರು

ಕೆಲವರು ನನ್ನನ್ನು ರಾಜಕೀಯವಾಗಿ ಮುಗಿಸೋಕೆ ಷಡ್ಯಂತ್ರ ಮಾಡುತ್ತಿದ್ದಾರೆ ಎಂದು ಕೆಪಿಸಿಸಿ ಅಧ್ಯಕ್ಷ ಬಿ.ಕೆ.ಹರಿಪ್ರಸಾದ್ ಆರೋಪಿಸಿದ್ದಾರೆ.

ಕೆಪಿಸಿಸಿ ಕಚೇರಿಯಲ್ಲಿಂದು ಮಾತನಾಡಿದ ಅವರು, ಬಿ.ಕೆ.ಹರಿಪ್ರಸಾದ್ ಸಂಪುಟ ಸೇರುತ್ತಾರೆ ಎಂಬ ಮಾತುಗಳು ಕೇಳುತ್ತಿರುವ ಬಗ್ಗೆ ಪ್ರತಿಕ್ರಿಯಿಸುತ್ತಾ, ಸಚಿವ ಸಂಪುಟ ವಿಸ್ತರಣೆ ವಿಚಾರವನ್ನು ಸಿಎಂ ಅವರೇ ಹೇಳಬೇಕು. 140 ಶಾಸಕರಿದ್ದಾರೆ. ಅವರಲ್ಲಿ ಯಾರಿಗೆ ಅಂತ ವರಿಷ್ಠರು ತೀರ್ಮಾನ ಮಾಡುತ್ತಾರೆ ಎಂದರು.

ರಾಹುಲ್ ಗಾಂಧಿ ಅವರನ್ನು ಪ್ರಧಾನಿ ಮಾಡಬೇಕು. ರಾಜ್ಯದಲ್ಲಿ ಜಾಗೃತಿ ಮೂಡಿಸುವ ಕೆಲಸ ಆಗುತ್ತಿದೆ. ರಾಜ್ಯಕ್ಕೆ ಬಂದು ಅಭಿಯಾನದಲ್ಲಿ ಭಾಗವಹಿಸುವಂತೆ ರಾಹುಲ್ ಗಾಂಧಿಗೆ ಮನವಿ ಮಾಡಿದ್ದೇವೆ. ಅವರು ಸದ್ಯದಲ್ಲೇ ತಿಳಿಸುತ್ತಾರೆ ಎಂದು ತಿಳಿಸಿದರು.

ಕೋಟಾ ಎಜುಕೇಶನ್ ಹಬ್ ಅಂತೇವೆ. ಸರಣಿ ಆತ್ಮಹತ್ಯೆಗಳ ಹಿನ್ನೆಲೆಯಲ್ಲಿ ರಾಹುಲ್ ಗಾಂಧಿ ಛಾತ್ರೋಂಕಿ ಗೂಂಜ್ ಎಂಬ ಕಾರ್ಯಕ್ರಮ ಹಮ್ಮಿಕೊಂಡಿದ್ದಾರೆ. ದೇಶದಲ್ಲಿ 152 ಪ್ರಶ್ನೆಪತ್ರಿಕೆ ಸೋರಿಕೆ ಘಟನೆಗಳು ನಡೆದಿವೆ. ಸಾಮಾನ್ಯ ವಿದ್ಯಾರ್ಥಿಗಳ ಭವಿಷ್ಯ ಆಂತಕದಲ್ಲಿದೆ. ಬಿಜೆಪಿ ಸರ್ಕಾರ ಇರುವ ಕಡೆಯೇ ಇದೆಲ್ಲ ಆಗುತ್ತಿವೆ. ಇದರ ಫಲಾನುಭವಿಗಳು ಬಿಜೆಪಿ ನಾಯಕರ ಮಕ್ಕಳೇ. ರಾಜಸ್ಥಾನ, ಗುಜರಾತ್ ಎಲ್ಲೆಡೆ ಆಗಿದೆ. ಪೊಲೀಸರು ವಶಕ್ಕೆ ಪಡೆದಿರುವುದು ಬಿಜೆಪಿಯವರ ಮಕ್ಕಳನ್ನೇ ಎಂದು ಟೀಕಿಸಿದರು.

ಭಾರತದ ಶಿಕ್ಷಣ ವ್ಯವಸ್ಥೆ ಉತ್ತಮವಿತ್ತು. 550 ಯುನಿವರ್ಸಿಟಿಗಳನ್ನು ನೆಹರು ತಂದರು. ಅವೆಲ್ಲ ನೆಹರು ದೂರದೃಷ್ಟಿಯಿಂದ ಬಂದಿದ್ದು. ವಿದ್ಯಾರ್ಥಿಗಳ ಭವಿಷ್ಯ ಕಟ್ಟುವ ಕೆಲಸ ಮಾಡಿದ್ದರು. ಇವತ್ತು ಶಿಕ್ಷಣ ವ್ಯವಸ್ಥೆ ಮೇಲೆ ದಾಳಿಯಾಗಿದೆ ಎಂದರು. ಚಾಯ್ ಪೇ ಚರ್ಚಾ ಅಂತ ಪ್ರಧಾನಿ ಹೇಳುತ್ತಾರೆ. ಅವರು ಒಂದು ಡಿಗ್ರಿ ಮಾಡಿಲ್ಲ. ಪ್ರಧಾನಿ ಫೇಕ್ ಸರ್ಟಿಫಿಕೇಟ್ ಇಟ್ಟುಕೊಂಡವರು. ಇಂಥವರಿಂದ ಇನ್ನೇನು ನಿರೀಕ್ಷಿಸಲು ಸಾಧ್ಯ. 10 ವರ್ಷದಿಂದ ಎಷ್ಟು ಪ್ರಶ್ನೆ ಪತ್ರಿಕೆ ಸೋರಿಕೆಯಾಗಿದೆ. ಇದರ ಮೇಲೆ ಎಷ್ಟು ತನಿಖೆಗಳಾಗಿವೆ. ಪ್ರಶ್ನೆ ಸೋರಿಕೆ ಮಾಡಿದವರಿಗೆ ರಕ್ಷಣೆ ಯಾರು ಕೊಡುತ್ತಿರುವುದು ಎಂದು ಪ್ರಶ್ನಿಸಿದರು.

## ಚೆನ್ನಮ್ಮ ಅಂತ್ಯಕ್ರಿಯೆ: ಇಂದು ಹೊಳೆನರಸೀಪುರ ತಾಲ್ಲೂಕಿನ ಶಾಲಾ, ಕಾಲೇಜುಗಳಿಗೆ ರಜೆ ಘೋಷಣೆ

• ಉದಯವಾಹಿನಿ, ಬೆಂಗಳೂರು

ಮಾಜಿ ಪ್ರಧಾನಿ ದೇವೇಗೌಡರ ಪತ್ನಿ ಚೆನ್ನಮ್ಮ ನಿಧನರಾಗಿದ್ದು, ನಾಳೆ ಅಂದರೆ ಜುಲೈ 20ರಂದು ಹಾಸನ ಜಿಲ್ಲೆಯ ಹೊಳೆನರಸೀಪುರ ತಾಲ್ಲೂಕಿನ ಮಾವಿನಕೆರೆ ಶ್ರೀರಂಗನಾಥಸ್ವಾಮಿ ಬೆಟ್ಟದ ತಪ್ಪಲು ಪ್ರದೇಶದಲ್ಲಿರುವ ಕ್ಯಾತನಹಳ್ಳಿಯಲ್ಲಿ ಸಕಲ ಸರ್ಕಾರಿ ಗೌರವಗಳೊಂದಿಗೆ ಅಂತ್ಯಕ್ರಿಯೆ ನಡೆಯಲಿದೆ. ಇದಕ್ಕಾಗಿ ಈಗಾಗಲೇ ಹಾಸನ ಜಿಲ್ಲಾಡಳಿತ ಸಹ ಸಕಲ ಸಿದ್ಧತೆಗಳನ್ನು ಮಾಡಿಕೊಂಡಿದ್ದು, ಮುಂಜಾಗ್ರತಾ ಕ್ರಮವಾಗಿ ತಾಲ್ಲೂಕಿನ ಎಲ್ಲಾ ಶಾಲಾ ಕಾಲೇಜುಗಳಿಗೆ ರಜೆ ಘೋಷಣೆ ಮಾಡಿದೆ. ಹೌದು.. ಸೋಮವಾರ ಜುಲೈ 20ರಂದು ಹೊಳೆನರಸೀಪುರ ತಾಲ್ಲೂಕಿನ ಅಂಗನವಾಡಿ, ಪ್ರಾಥಮಿಕ ಮತ್ತು ಪ್ರೌಢಶಾಲೆ ಹಾಗೂ ಕಾಲೇಜುಗಳಿಗೆ ರಜೆ ನೀಡಿ ಜಿಲ್ಲಾಧಿಕಾರಿ ಲತಾಕುಮಾರಿ ಘೋಷಣೆ ಮಾಡಿದ್ದಾರೆ.

## ಇಂದಿನಿಂದ ಸಂಸತ್ ಮುಂಗಾರು ಅಧಿವೇಶನ ಆರಂಭ

• ಉದಯವಾಹಿನಿ, ಬೆಂಗಳೂರು



ಸಂಸತ್ತಿನ ಮುಂಗಾರು ಅಧಿವೇಶನವು ಜುಲೈ 20ರಿಂದ ಅಧಿಕೃತವಾಗಿ ಪ್ರಾರಂಭವಾಗಲಿದ್ದು, ಆಡಳಿತ ಹಾಗೂ ವಿರೋಧ ಪಕ್ಷಗಳ ನಡುವೆ ಭಾರಿ ಸಂಘರ್ಷಕ್ಕೆ ವೇದಿಕೆ ಸಿದ್ಧವಾಗಿದೆ.

ಕೇಂದ್ರ ಸರ್ಕಾರವು ಹಲವು ಪ್ರಮುಖ ಮಸೂದೆಗಳನ್ನು ಅಂಗೀಕರಿಸಲು ಸಜ್ಜಾಗಿದ್ದರೆ, ಇತ್ತ ವಿರೋಧ ಪಕ್ಷಗಳು ವಿವಿಧ ರಾಜಕೀಯ ಮತ್ತು ಆಡಳಿತಾತ್ಮಕ ವೈಫಲ್ಯಗಳನ್ನು ಮುಂದಿಟ್ಟುಕೊಂಡು ಸರ್ಕಾರವನ್ನು ತರಾಟೆಗೆ ತೆಗೆದುಕೊಳ್ಳಲು ಸಿದ್ಧತೆ ನಡೆಸಿವೆ. ಈ ಬಾರಿಯ ಮುಂಗಾರು ಅಧಿವೇಶನವು ಪೇಪರ್ ಲೀಕ್, ಭ್ರಷ್ಟಾಚಾರದ ಆರೋಪಗಳು ಮತ್ತು ಪಕ್ಷಾಂತರದ ವಿವಾದಗಳ ಹಿನ್ನೆಲೆಯಲ್ಲಿ ತೀವ್ರ ವಾಕ್ಸಮರಕ್ಕೆ ಸಾಕ್ಷಿಯಾಗುವ ಎಲ್ಲಾ ಮುನ್ಸೂಚನೆಗಳು ಸಿಕ್ಕಿವೆ. ಕೇಂದ್ರ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಅವರು ಅಧಿವೇಶನವನ್ನು ಶಾಂತಿಯುತವಾಗಿ ನಡೆಸಲು ಎಲ್ಲಾ ರಾಜಕೀಯ ಪಕ್ಷಗಳ ಸಹಕಾರ ಕೋರಿದ್ದಾರೆ. ಸಂಸತ್ತು ಎಲ್ಲರಿಗೂ ಸೇರಿದ್ದಾಗಿದೆ. ಆಡಳಿತ ಮತ್ತು ವಿರೋಧ ಪಕ್ಷಗಳು ಒಟ್ಟಾಗಿ ಕೆಲಸ ಮಾಡಬೇಕಿದೆ. ನಾವು ವಿರೋಧ ಪಕ್ಷಗಳ ಧ್ವನಿಯನ್ನು ಕೇಳಲು ಸಿದ್ಧರಿದ್ದೇವೆ, ಅದೇ ರೀತಿ ಅವರು ನಮ್ಮ ಮಾತನ್ನು ಕೇಳುತ್ತಾರೆ ಎಂಬ ಭರವಸೆ ಇದೆ. ಸಂಸತ್ತು ಎಷ್ಟು ಚೆನ್ನಾಗಿ ನಡೆಯುತ್ತದೆಯೋ ದೇಶಕ್ಕೆ ಅಷ್ಟೇ ಒಳ್ಳೆಯದು ಎಂದು ಕಿರಣ್ ರಿಜಿಜು ಹೇಳಿದ್ದಾರೆ.

## ಕರಾವಳಿ, ಮಲೆನಾಡು ಸೇರಿ ರಾಜ್ಯದ ಹಲವೆಡೆ ಮುಂದಿನ 7 ದಿನ ಮಳೆ ನಿರೀಕ್ಷೆ

• ಉದಯವಾಹಿನಿ, ಬೆಂಗಳೂರು

ಕಳೆದ ಕೆಲ ದಿನಗಳಿಂದ ರಾಜ್ಯದಲ್ಲಿ ತಾಪಮಾನ ಏರಿಕೆಯಿಂದ ತತ್ತರಿಸಿದ್ದ ಹಲವೆಡೆ ಮಳೆ ತಂಪೆರೆದಿದೆ. ರಾಜ್ಯದ ಹಲವು ಜಿಲ್ಲೆಗಳಲ್ಲಿ ವರುಣನ ಸಿಂಚನವಾಗಿದ್ದು, ಮುಂದಿನ 7 ದಿನಗಳ ಕಾಲ ರಾಜ್ಯಾದ್ಯಂತ ಅಲ್ಲಲ್ಲಿ ಜೋರಾದ ಗಾಳಿ, ಗುಡುಗು, ಸಿಡಿಲು ಸಹಿತ ಹಗುರದಿಂದ ಸಾಧಾರಣ ಮಳೆಯಾಗಲಿದೆ ಎಂದು ಕರ್ನಾಟಕ ರಾಜ್ಯ ವಿಪತ್ತು ನಿರ್ವಹಣಾ ಕೇಂದ್ರ ತಿಳಿಸಿದೆ.

ಕರಾವಳಿ ಜಿಲ್ಲೆಗಳು ಹಾಗೂ ಮಲೆನಾಡಿನ ಹಲವು ಕಡೆಗಳಲ್ಲಿ ಮುಂದಿನ ಎರಡು ದಿನಗಳು ಭಾರಿ ಮಳೆಯಾಗುವ ಮುನ್ಸೂಚನೆಯನ್ನು ಹವಾಮಾನ ಇಲಾಖೆ ನೀಡಿದೆ. ದಕ್ಷಿಣ ಕನ್ನಡ, ಉತ್ತರ ಕನ್ನಡ ಉಡುಪಿ ಚಿಕ್ಕಮಗಳೂರು, ಶಿವಮೊಗ್ಗ ಹಾಗೂ ಬೆಳಗಾವಿ ಜಿಲ್ಲೆಗಳ ವಿವಿಧ ಭಾಗಗಳಲ್ಲಿ ಮುಂದಿನ 24 ರಿಂದ 48 ಗಂಟೆಗಳಲ್ಲಿ 30-40 ಕಿಲೋಮೀಟರ್ ವೇಗದ ಗಾಳಿ ಸಹಿತ ಭಾರಿ ಮಳೆಯಾಗುವ ಮುನ್ಸೂಚನೆ ನೀಡಲಾಗಿದೆ.

## ಗುಳೆ ಹೋಗುವುದನ್ನು ತಪ್ಪಿಸಲು ಜನರಿಗೆ ಉದ್ಯೋಗ ನೀಡಿ: ಜಿಲ್ಲಾ ಪಂಚಾಯತ್ ಸಿಇಒಗಳಿಗೆ ಪರಮೇಶ್ವರ್ ಸೂಚನೆ

• ಉದಯವಾಹಿನಿ, ಬೆಂಗಳೂರು

ಬರಗಾಲದ ಹಿನ್ನೆಲೆಯಲ್ಲಿ ಜನರು ಉದ್ಯೋಗಕ್ಕಾಗಿ ಗುಳೆ ಹೋಗುತ್ತಿದ್ದಾರೆ. ಎಲ್ಲಾ ಜಿಲ್ಲಾ ಪಂಚಾಯತ್ ಸಿಇಒಗಳು ವಿಬಿ -ಜಿ ರಾಮ್ ಜಿ ಯೋಜನೆಯಡಿ ಕೂಡಲೇ ಜನರಿಗೆ ಉದ್ಯೋಗ ನೀಡಿ, ಗುಳೆ ಹೋಗುವುದನ್ನು ತಪ್ಪಿಸಲು ಕ್ರಮ ವಹಿಸಬೇಕು ಎಂದು ಉಪಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್ ಸೂಚನೆ ನೀಡಿದರು. ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಸಿಎಂ ಡಿ.ಕೆ. ಶಿವಕುಮಾರ್ ಅವರ ಅಧ್ಯಕ್ಷತೆಯಲ್ಲಿ 'ಬರ ಪರಿಸ್ಥಿತಿ, ಕುಡಿಯುವ ನೀರು, ಜಾನುವಾರುಗಳಿಗೆ ಮೇವು, ಕೃಷಿ, ಚಟುವಟಿಕೆ ಹಾಗೂ ಉದ್ಯೋಗ ವಿಷಯಗಳ ಕುರಿತು ಎಲ್ಲಾ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳೊಂದಿಗೆ ವೀಡಿಯೋ ಕಾನ್ಫರೆನ್ಸ್ ಮೂಲಕ ಮಾಹಿತಿ ಪಡೆದು, ಸೂಕ್ತ ನಿರ್ದೇಶನಗಳನ್ನು ನೀಡಿದರು. ವಿಜಯಪುರ ತಾಲ್ಲೂಕಿನಲ್ಲಿ ವಿಬಿ-ಜಿ ರಾಮ್ ಜಿ ಯೋಜನೆಯ ಅಡಿ 20 ಗ್ರಾಮ ಪಂಚಾಯಿತಿಗಳಲ್ಲಿ ಮಾತ್ರ ಜನರಿಗೆ ಕೆಲಸ ನೀಡಲಾಗುತ್ತಿದೆ. ಬರಗಾಲದ ಹಿನ್ನೆಲೆಯಲ್ಲಿ ಜನ ಗುಳೆ ಹೋಗುತ್ತಿದ್ದಾರೆ ಎಂದು ವರದಿಯಾಗುತ್ತಿದೆ. ಕೂಡಲೇ ಕೆಲಸ ಆರಂಭಿಸಬೇಕು. ಜನರಿಗೆ ಊರುಗಳಲ್ಲಿ ಕೆಲಸ ನೀಡಿ, ಗುಳೆ ಹೋಗುವುದನ್ನು ತಪ್ಪಿಸಬೇಕು ಎಂದು ಸೂಚನೆ ನೀಡಿದರು.

ವಿಬಿ ಜಿ ರಾಮ್ ಜಿ ಯೋಜನೆಯಡಿ ರಾಜ್ಯದ್ಯಾಂತ ತಿಂಗಳಿಗೆ 1.10 ಕೋಟಿ ಮಾನವ ದಿನಗಳನ್ನು ಸೃಜಿಸಿ, ಪೂರ್ಣಗೊಳಿಸುವ ಗುರಿ ಇಟ್ಟುಕೊಳ್ಳಲಾಗಿದೆ. ಈವರೆಗೂ ಕೆಲಸ ಆರಂಭಿಸಿಲ್ಲವಾದರೆ, ಗುರಿ ಪೂರ್ಣಗೊಳಿಸಲು ಹೇಗೆ ಸಾಧ್ಯ ಎಂದು ಪ್ರಶ್ನಿಸಿ, ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡರು.

ಬರ ಇರುವುದರಿಂದ ಜನರಿಗೆ ಉದ್ಯೋಗದ ಅವಶ್ಯಕತೆ ಬಹಳ ಇದೆ. ಜಿಲ್ಲಾ



ಪಂಚಾಯತ್ ಸಿಇಒಗಳು ವಿಬಿ -ಜಿ ರಾಮ್ ಜಿ ಯೋಜನೆಯಡಿ ಕೂಡಲೇ ಜನರಿಗೆ ಕೆಲಸ ನೀಡಬೇಕು. ಈ ಬಗ್ಗೆ ತ್ವರಿತಗತಿಯಲ್ಲಿ ಕ್ರಮ ವಹಿಸಬೇಕು ಎಂದು ನಿರ್ದೇಶನ ನೀಡಿದರು. ಬಳ್ಳಾರಿ, ಬಾಗಲಕೋಟೆ, ಹಾವೇರಿ, ಚಾಮರಾಜನಗರ, ವಿಜಯಪುರ ಸೇರಿದಂತೆ ಮುಂತಾದ ಜಿಲ್ಲೆಗಳು ವಿಬಿ-ಜಿ ರಾಮ್ ಜಿ ಯೋಜನೆಯಡಿ ಜನರಿಗೆ ಕೆಲಸ ನೀಡುವಲ್ಲಿ ತೀರ ಹಿಂದೆ ಬಿದ್ದಿವೆ. ಬಹುತೇಕ ಆರಂಭಿಸಿಲ್ಲ. ಚಾಮರಾಜನಗರ ಜಿಲ್ಲೆಯ ಅಂಕಿ-ಅಂಶ ಗಮನಿಸಿದರೆ ಆಶ್ಚರ್ಯವಾಗುತ್ತದೆ. ಜನ ತಮಿಳುನಾಡು, ಬೆಂಗಳೂರಿಗೆ ವಲಸೆ ಹೋಗುತ್ತಿದ್ದಾರೆ. ವಿಬಿ-ಜಿ ರಾಮ್ ಜಿ ಯೋಜನೆಯಡಿ ಏನೆಲ್ಲ ಕೆಲಸಗಳನ್ನು ತೆಗೆದುಕೊಳ್ಳಬಹುದು ಎಂಬುದನ್ನು ಸಾರ್ವಜನಿಕರಿಗೆ ತಿಳಿಸುವ ಕೆಲಸವಾಗಬೇಕು ಎಂದು ಹೇಳಿದರು.

ಬಹುತೇಕ ಜಿಲ್ಲೆಗಳಲ್ಲಿ 25 ವಾರ, 38 ವಾರ, 54 ವಾರಗಳಿಗೆ ಆಗುವಷ್ಟು ಮೇವು ಸಂಗ್ರಹವಿದೆ ಎಂದೆಲ್ಲ ಮಾಹಿತಿ ನೀಡಲಾಗುತ್ತಿದೆ. ರೈತರ ಬಳಿ ಸಂಗ್ರಹವಿರುವ ಮೇವಿನ ಬಣವೆಗಳನ್ನು ಆಧರಿಸಿ ಸರ್ಕಾರಕ್ಕೆ ಮಾಹಿತಿ ನೀಡುವುದು ಸರಿಯಲ್ಲ. ರೈತರು ಸಂಗ್ರಹಿಸಿರುವುದು ನಮಗೆ ಲಭ್ಯವಾಗುವುದಿಲ್ಲ. ನಿಮ್ಮಲ್ಲಿ ಲಭ್ಯತೆ ಇರುವುದನ್ನು ಮಾತ್ರ ತಿಳಿಸಬೇಕು. ಜಾನುವಾರುಗಳಿಗೆ ತಕ್ಷಣಕ್ಕೆ ಮೇವು ಬೇಕು ಎಂದಾಗ ಒದಗಿಸುತ್ತೀರಿ ಎಂಬುದು ಮುಖ್ಯವಾಗುತ್ತದೆ ಎಂದರು.

## ಗೃಹಲಕ್ಷ್ಮಿ ಯೋಜನೆ ಬಗ್ಗೆ ಡಿಕೆಶಿ ಬಿಗ್ ಅಪ್ಡೇಟ್: 2000 ರೂ.ಬೇಕು ಅಂದ್ರೆ ಈ ನಿಯಮಗಳನ್ನ ಪಾಲಿಸಲೇಬೇಕು

• ಉದಯವಾಹಿನಿ, ಬೆಂಗಳೂರು

ಗೃಹಲಕ್ಷ್ಮೀ ಯೋಜನಯನ್ನು ಪರಿಷ್ಕರಣೆ ಮಾಡಲು ರಾಜ್ಯ ಸರ್ಕಾರ ತೀರ್ಮಾನಿಸಿದ್ದು, ಭಾನುವಾರ ನಡೆದ ಸಚಿವ ಸಂಪುಟದಲ್ಲಿ ಈ ಬಗ್ಗೆ ಮಹತ್ವದ ಚರ್ಚೆ ಆಗಿದೆ.

ಹೌದುಗೃಹಲಕ್ಷ್ಮಿ ಫಲಾನುಭವಿಗಳ ಮರುಪರಿಶೀಲನೆ ನಡೆಸಲು ಸರ್ಕಾರ ಸಜ್ಜಾಗಿದ್ದು, ಗೃಹಲಕ್ಷ್ಮೀ ಹಣಕ್ಕೆ ಬಯೋಮೆಟ್ರಿಕ್ ಕಡ್ಡಾಯಗೊಳಿಸಲು ಸಚಿವ ಸಂಪುಟ ಸಭೆಯಲ್ಲಿ ತೀರ್ಮಾನ ಕೈಗೊಳ್ಳಲಾಗಿದೆ. ಪ್ರತಿ ಒಂದು ಕುಟುಂಬದ ಯಜಮಾನಿಗೆ 2000 ರೂ. ಆರ್ಥಿಕ ನೆರವು ನೀಡುವ ಯೋಜನೆಯೇ ಗೃಹಲಕ್ಷ್ಮಿ. ಆದ್ರೆ ಅನರ್ಹರು ಕೂಡ ಯೋಜನೆಯ ಲಾಭ ಪಡೆಯುತ್ತಿರುವ ಬಗ್ಗೆ ದೂರುಗಳು ಬಂದ ಹಿನ್ನೆಲೆಯಲ್ಲಿ ಸರ್ಕಾರ ಈ ಪರಿಷ್ಕರಣೆಗೆ ಮುಂದಾಗಿದ್ದು, ಅರ್ಹ ಫಲಾನುಭವಿಗಳ ಮೊಬೈಲ್ ನಂಬರ್ ಹಾಗೂ ಬ್ಯಾಂಕ್ ಖಾತೆ ಇರುವುದು ಕಡ್ಡಾಯಗೊಳಿಸಲಾಗಿದೆ.

ಸಚಿವ ಸಂಪುಟ ಬಳಿಕ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಸಿಎಂ ಡಿಕೆ ಶಿವಕುಮಾರ್, ಗೃಹಲಕ್ಷ್ಮೀ ಹಣಕ್ಕೆ ಬಯೋಮೆಟ್ರಿಕ್ ಕಡ್ಡಾಯವಾಗಿದೆ.

ಅವರದ್ದೇ ಫೋನ್ ನಂಬರ್ ಇರಬೇಕು. ಯಾರದ್ದೋ ನಂಬರ್ ಕೊಟ್ಟು ಅವರಿಗೆ ಮೆಸೇಜ್ ಹೋಗಬಾರದು. ಗಂಡನ ಖಾತೆ ಮತ್ತು ಮಕ್ಕಳ ಖಾತೆ ಕೂಡ ಇರಬಾರದು. ಮಹಿಳೆಯರ ಅಕೌಂಟ್‌ಗೆ ಸರ್ಕಾರದ ಹಣ ಹೋಗಬೇಕು ಎಂದು ವಿವರಿಸಿದರು. ನಮ್ಮ ಗ್ಯಾರಂಟಿ ತಂಡ ಹೋಗಿ ಮಾಹಿತಿ ಪಡೆಯಬೇಕು. ಇದಕ್ಕಾಗಿ 20 ಕೋಟಿ ರೂಪಾಯಿ




ಇಟ್ಟಿದ್ದೇವೆ. ಫಾರಂ ಯಾವ ರೀತಿ ಇರಬೇಕು ಅಂತ ಚರ್ಚಿಸಲಾಗಿದ್ದು, ಗಂಡನ ಖಾತೆ ಮತ್ತು ಮಕ್ಕಳ ಖಾತೆ ಕೂಡ ಇರಬಾರದು. ಮಹಿಳೆಯರ ಅಕೌಂಟ್‌ಗೆ ಸರ್ಕಾರದ ಹಣ ಹೋಗಬೇಕು. ಯೋಜನೆಯಿಂದ ಯಾರನ್ನು ತೆಗೆಯುವ ಉದ್ದೇಶವಿಲ್ಲ.ನಾವು ಕೊಡುವ ಹಣ ಅವರಿಗೆ ಸರಿಯಾಗಿ ತಲುಪಬೇಕು ಎಂದು ಸ್ಪಷ್ಟಪಡಿಸಿದರು. ಸರ್ಕಾರ ಆಪರೇಷನ್ ಗೃಹಲಕ್ಷ್ಮಿ ಹೆಸರಿನಲ್ಲಿ ನಿಜವಾದ ಫಲಾನುಭವಿಗಳನ್ನು ಗುರುತು ಮಾಡುವ ಕೆಲಸ ಮಾಡ್ತಿದೆ. ಪ್ರತಿ ಒಂದು ಕುಟುಂಬದ ಯಜಮಾನಿಗೆ 2000 ರೂ. ಆರ್ಥಿಕ ನೆರವು ನೀಡುವ ಯೋಜನೆಯೇ ಗೃಹಲಕ್ಷ್ಮಿ. ಆದ್ರೆ ಅನರ್ಹರು ಕೂಡ ಯೋಜನೆಯ ಲಾಭ ಪಡೆಯುತ್ತಿರುವ ಬಗ್ಗೆ ದೂರುಗಳು ಬಂದ ಹಿನ್ನೆಲೆಯಲ್ಲಿ ಸರ್ಕಾರ ಪರಿಷ್ಕರಣೆಗೆ ಮುಂದಾಗಿದೆ. ಒಟ್ಟು 1.20 ಕೋಟಿಗೂ ಅಧಿಕ ಫಲಾನುಭವಿಗಳಿದ್ದು, ಮೃತಪಟ್ಟವರನ್ನು ಕೈಬಿಡಲಾಗಿದೆ.

ಸದ್ಯ 4.30 ಲಕ್ಷ ಫಲಾನುಭವಿಗಳ ಹೆಸರನ್ನು ಡಿಲೀಟ್ ಮಾಡಲಾಗಿದ್ದು, ಈ ಮೂಲಕ ನೂರಾರು ಕೋಟಿ ರೂ. ಉಳಿತಾಯ ಆಗಲಿದೆ.

## 'ರಾಮಮಂದಿರ ದೇಣಿಗೆ ಹಗರಣದಲ್ಲಿ ಮೌನವೇಕೆ?'; ಪ್ರಧಾನಿ ಮೋದಿಗೆ ರಾಹುಲ್ ಗಾಂಧಿ, ಖರ್ಗೆ ಪತ್ರ

• ಉದಯವಾಹಿನಿ, ನವದೆಹಲಿ

ಅಯೋಧ್ಯೆಯ ರಾಮಮಂದಿರದ ದೇಣಿಗೆಯಲ್ಲಿ ಭಾರಿ ಪ್ರಮಾಣದ ಕಳ್ಳತನ ನಡೆದಿದೆ ಎಂಬ ಆರೋಪದ ಬೆನ್ನಲ್ಲೇ ಕಾಂಗ್ರೆಸ್ ನಾಯಕರಾದ ರಾಹುಲ್ ಗಾಂಧಿ ಮತ್ತು ಮಲ್ಲಿಕಾರ್ಜುನ ಖರ್ಗೆ ಇಂದು ಪ್ರಧಾನಿ ನರೇಂದ್ರ ಮೋದಿ ಅವರಿಗೆ ಪತ್ರ ಬರೆದಿದ್ದಾರೆ. ಶ್ರೀರಾಮ ಜನ್ಮಭೂಮಿ ತೀರ್ಥ ಕ್ಷೇತ್ರ ಟ್ರಸ್ಟ್'ನ ಹಣಕಾಸು ವ್ಯವಹಾರಗಳ ಕುರಿತು ಸಮಗ್ರ ತನಿಖೆ ನಡೆಸಬೇಕೆಂದು ಆಗ್ರಹಿಸಿರುವ ಅವರು, ತಮ್ಮ ಕಷ್ಟದ ಗಳಿಕೆಯನ್ನು ಭಕ್ತಿಯಿಂದ ದಾನ ಮಾಡಿದ ಲಕ್ಷಾಂತರ ಭಕ್ತರಿಗೆ ಈ ಕಳ್ಳತನದಿಂದ ವಂಚನೆಯಾಗಿದೆ. ಈ ಹಗರಣದಲ್ಲಿ ನೀವು ಮೌನ ವಹಿಸಿರುವುದನ್ನು ಒಪ್ಪಲು ಸಾಧ್ಯವಿಲ್ಲ ಎಂದಿದ್ದಾರೆ. ತಾವು ಬರೆದ ಪತ್ರದಲ್ಲಿ ಪ್ರಧಾನಿ ನರೇಂದ್ರ ಮೋದಿಯವರನ್ನು ಟೀಕಿಸಿರುವ ಮಲ್ಲಿಕಾರ್ಜುನ ಖರ್ಗೆ ಮತ್ತು ರಾಹುಲ್‌ಗಾಂಧಿ, ಶ್ರೀರಾಮ ಜನ್ಮಭೂಮಿ ತೀರ್ಥ ಕ್ಷೇತ್ರ ಟ್ರಸ್ಟ್‌ನಲ್ಲಿ ಸಾವಿರಾರು ಕೋಟಿ ರೂ.ಗಳ ಕಳ್ಳತನ ನಡೆದಿರುವುದು ನಿಮ್ಮ ಗಮನಕ್ಕೆ ಬಂದಿದೆ. ಅಪಾರ ನಂಬಿಕೆ, ಭಕ್ತಿ ಮತ್ತು ವಿಶ್ವಾಸದಿಂದ ತಮ್ಮ ಕಷ್ಟದ ಹಣವನ್ನು ದೇಣಿಗೆಯಾಗಿ ನೀಡಿದ ಲಕ್ಷಾಂತರ ಭಕ್ತರಿಗೆ ಈ ಕಳ್ಳತನದಿಂದಾಗಿ ದ್ರೋಹ ಬಗೆದಂತಾಗಿದೆ ಎಂದು ಹೇಳಿದ್ದಾರೆ.

ಹಾಗೇ, ರಾಮ ಮಂದಿರ ಟ್ರಸ್ಟ್‌ನ ರಚನೆಯ ಕುರಿತು ಪ್ರಶ್ನಿಸಿರುವ ಕಾಂಗ್ರೆಸ್ ನಾಯಕರು, ಪ್ರಧಾನಿಯವರ ಮೌನವನ್ನು ತೀವ್ರವಾಗಿ ಟೀಕಿಸಿದ್ದಾರೆ. ಸುಪ್ರೀಂಕೋರ್ಟ್



ನ ನಿರ್ದೇಶನದ ಮೇರೆಗೆ ನೀವು ಸಂಸತ್ತಿನಲ್ಲಿ ಈ ಟ್ರಸ್ಟ್ ರಚನೆಯನ್ನು ಘೋಷಿಸಿದ್ದೀರಿ. ಇದರ ಸದಸ್ಯರನ್ನು ಸಂಪೂರ್ಣವಾಗಿ ನಿಮ್ಮ ಸರ್ಕಾರವೇ ನೇಮಿಸಿದೆ. ಈ ಟ್ರಸ್ಟ್‌ನ ಸದಸ್ಯರು ಆರ್‌ಎಸ್‌ಎಸ್, ವಿಎಚ್‌ಪಿ ಮತ್ತು ಅದರ ಅಂಗಸಂಸ್ಥೆಗಳಿಗೆ ಸೇರಿದವರಾಗಿದ್ದಾರೆ ಎಂಬುದು ಸಾರ್ವಜನಿಕವಾಗಿ ತಿಳಿದಿರುವ ವಿಚಾರ. ಇದರ ಅಪಕೀರ್ತಿಗೆ ಒಳಗಾಗಿರುವ ಮಾಜಿ ಪ್ರಧಾನ ಕಾರ್ಯದರ್ಶಿ ಕೂಡ ನಿಮ್ಮ ಆಪ್ತರಾಗಿದ್ದರು. ಹೀಗಿರುವಾಗ ಈ ದೇಣಿಗೆ ವಂಚನೆಯಲ್ಲಿ ನೀವು ಯಾವುದೇ ಪ್ರತಿಕ್ರಿಯೆ ನೀಡದಿರುವುದು ಬೇರೆ ರೀತಿಯ ಸಂದೇಶ ರವಾನಿಸುವ ಸಾಧ್ಯತೆಯಿದೆ ಎಂದು ಪತ್ರದಲ್ಲಿ ಉಲ್ಲೇಖಿಸಲಾಗಿದೆ.

ಇಂತಹ ದೊಡ್ಡ ಅಪರಾಧದ ಸಂದರ್ಭದಲ್ಲೂ ನಿಮ್ಮ ಮೌನವನ್ನು ಒಪ್ಪಲು ಸಾಧ್ಯವಿಲ್ಲ. ಇದಕ್ಕೆ ಹೊಣೆಗಾರರಾದವರಿಗೆ ಶಿಕ್ಷೆಯಾಗಬೇಕು. ನಗದು, ಚಿನ್ನ, ಬೆಳ್ಳಿ ಸೇರಿದಂತೆ ಎಲ್ಲಾ ಕಾಣಿಕೆಗಳ ನಿರ್ವಹಣೆಯನ್ನು ಒಳಗೊಂಡಂತೆ ಟ್ರಸ್ಟ್‌ನ ಹಣಕಾಸು ವ್ಯವಹಾರಗಳ ಬಗ್ಗೆ ತಕ್ಷಣವೇ ಸ್ವತಂತ್ರ ಮತ್ತು ಸಮಗ್ರ ತನಿಖೆಗೆ ಆದೇಶಿಸಬೇಕು'' ಎಂದು ರಾಹುಲ್ ಗಾಂಧಿ ಮತ್ತು ಖರ್ಗೆ ಒತ್ತಾಯಿಸಿದ್ದಾರೆ. ಭಕ್ತರ ಕಾಣಿಕೆಗಳು ಹೇಗೆ ಬಳಕೆಯಾಗಿವೆ ಎಂಬುದನ್ನು ಪ್ರತಿಯೊಬ್ಬ ಭಕ್ತನೂ ತಿಳಿದುಕೊಳ್ಳುವಂತಾಗಲು ತನಿಖೆಯ ವರದಿ ಮತ್ತು ಟ್ರಸ್ಟ್‌ನ ಲೆಕ್ಕಪತ್ರಗಳನ್ನು ತಕ್ಷಣವೇ ಸಾರ್ವಜನಿಕಗೊಳಿಸಬೇಕು ಎಂದು ರಾಹುಲ್ ಗಾಂಧಿ ಮತ್ತು ಖರ್ಗೆ ಆಗ್ರಹಿಸಿದ್ದಾರೆ. ಯಾರೇ ತಪ್ಪಿತಸ್ಥರಾಗಿದ್ದರೂ, ಅವರ ಹುದ್ದೆ ಅಥವಾ ಪ್ರಭಾವವನ್ನು ಲೆಕ್ಕಿಸದೆ ಕಠಿಣ ಕ್ರಮ ಕೈಗೊಳ್ಳಬೇಕು. ನಿಮ್ಮ ಸರ್ಕಾರದ ಮತ್ತು ಟ್ರಸ್ಟ್‌ನ ವಿಶ್ವಾಸಾರ್ಹತೆಯು ನೀವು ಎಷ್ಟು ಪಾರದರ್ಶಕವಾಗಿ ಮತ್ತು ವೇಗವಾಗಿ ಕ್ರಮ ಕೈಗೊಳ್ಳುತ್ತೀರಿ ಎಂಬುದರ ಮೇಲೆ ಅವಲಂಬಿತವಾಗಿದೆ. ಭಾರತದ ಜನರು ಇದನ್ನು ಗಮನಿಸುತ್ತಿದ್ದಾರೆ. ಜೈ ಹಿಂದ್ ಎಂದು ಪತ್ರದಲ್ಲಿ ಪ್ರಸ್ತಾಪಿಸಲಾಗಿದೆ.

## ರಾಮಮಂದಿರ ದೇಣಿಗೆ ಹಗರಣ

ಅಯೋಧ್ಯೆಯಲ್ಲಿ ರಾಮಮಂದಿರದ ನಿರ್ಮಾಣ ಮತ್ತು ನಿರ್ವಹಣೆಯ ಜವಾಬ್ದಾರಿ ಹೊತ್ತಿರುವ ಶ್ರೀರಾಮ ಜನ್ಮಭೂಮಿ ತೀರ್ಥ ಕ್ಷೇತ್ರ ಟ್ರಸ್ಟ್' ಸ್ವೀಕರಿಸಿದ ದೇಣಿಗೆಯಲ್ಲಿ ಆರ್ಥಿಕ ಅಕ್ರಮಗಳು ನಡೆದಿವೆ ಎಂಬ ಆರೋಪಗಳು ಕೇಳಿಬಂದಿದೆ. ವಿಶೇಷ ತನಿಖಾ ತಂಡ ಈ ಆರೋಪಗಳ ಬಗ್ಗೆ ತನಿಖೆ ನಡೆಸುತ್ತಿದ್ದು, ಸುಪ್ರೀಂಕೋರ್ಟ್‌ನ ನಿರ್ದೇಶನದಂತೆ ತನ್ನ ವರದಿಯನ್ನು ನ್ಯಾಯಾಲಯದ ಮುಂದೆ ಮಂಡಿಸುವ ನಿರೀಕ್ಷೆಯಿದೆ. ಸದ್ಯಕ್ಕೆ ತನಿಖೆ ಪ್ರಗತಿಯಲ್ಲಿದ್ದು, ಯಾವುದೇ ಅಂತಿಮ ತೀರ್ಮಾನಕ್ಕೆ ಬರಲಾಗಿಲ್ಲ. ಈಗಾಗಲೇ ಟ್ರಸ್ಟ್‌ನ ಪ್ರಧಾನ ಕಾರ್ಯದರ್ಶಿ ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಿದ್ದು, ಅವರ ಜಾಗಕ್ಕೆ ಬೇರೆಯವರನ್ನು ನೇಮಿಸಲಾಗಿದೆ.

ನಿರ್ವಹಣೆಯ ಜವಾಬ್ದಾರಿ ಹೊತ್ತಿರುವ ರಾಮಮಂದಿರದ ಕಾಣಿಕೆ ಹಣದ ಕಳ್ಳತನಕ್ಕೆ ಸಂಬಂಧಿಸಿದಂತೆ ತನಿಖೆಯು ತೀವ್ರಗೊಂಡಿದೆ. ಈಗಾಗಲೇ ಎಂಟು ಜನರನ್ನು ಬಂಧಿಸಲಾಗಿದೆ. ಕಾಣಿಕೆ ಹಣವನ್ನು ಎಣಿಸುವ ಕಾರ್ಯದಲ್ಲಿ ತೊಡಗಿದ್ದ ಸುಮಾರು 30ಕ್ಕೂ ಹೆಚ್ಚು ಸಿಬ್ಬಂದಿಗಳ ಮೇಲೆ ತನಿಖಾ ಸಂಸ್ಥೆಗಳು ತೀವ್ರ ನಿಗಾ ಇಟ್ಟಿವೆ.

**ಈ ದಿನದ ದರ** ಪೆಟ್ರೋಲ್: 111.68₹/L | ಡೀಸೆಲ್ : 99.56₹/L | ಬಂಗಾರ: ₹ 14,329/Gram 24ct ₹13,135/Gram 22ct | ಬೆಳ್ಳಿ: ₹235.00/Gram

